## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 787 (905) |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೇಶವ ಪ್ರಸಾದ್ ಎಸ್<br>(ವಿಧಾನ ಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 11-03-2026 |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ದೇವರಹಿಪ್ಪರಗಿ ತಾಲ್ಲೂಕು ಕೇಂದ್ರವಾಗಿದ್ದು ಉಪನೋಂದಣಾಧಿಕಾರಿಗಳ ಕಛೇರಿಗಾಗಿ ಇನ್ನೂ ಸಿಂದಗಿ ತಾಲ್ಲೂಕನ್ನು ಅವಲಂಬಿಸಿರುವುದು ಸರ್ಕಾರದ ಗಮನಕ್ಕೆ ಇದೆಯೇ; | ಬಂದಿದೆ.<br><br>ನೂತನವಾಗಿ ರಚನೆಯಾಗಿರುವ ತಾಲ್ಲೂಕುಗಳಲ್ಲಿ ಹೊಸದಾಗಿ ಉಪ ನೋಂದಣಿ ಕಛೇರಿಗಳನ್ನು ಪ್ರಾರಂಭಿಸುವ ಬಗ್ಗೆ ಆರ್ಥಿಕ ಇಲಾಖೆಯ ಸಮಾಲೋಚನೆಯೊಂದಿಗೆ ವಾರ್ಷಿಕವಾಗಿ ರೂ.4.00 ಕೋಟಿಗಳಿಗಿಂತ ಹೆಚ್ಚು ರಾಜಸ್ವ ಸಂಗ್ರಹಣೆಯಾಗುವ ಉಪ ನೋಂದಣಿ ಕಛೇರಿಗಳಲ್ಲಿ ನೋಂದಣಿಯಾಗುವ ದಾಖಲೆಗಳ ಸಂಖ್ಯೆ/ ವಹಿವಾಟುಗಳ ಸಂಖ್ಯೆ ಮತ್ತು ಕೆಲಸದ ಹೊರೆಗೆ ಅನುಗುಣವಾಗಿ ಹುದ್ದೆಗಳನ್ನು ಮತ್ತು ಕಛೇರಿಗಳನ್ನು ಸ್ಥಳಾಂತರಗೊಳಿಸಿ, ತರ್ಕಬದ್ಧಗೊಳಿಸಲು (Rationalize) ಕ್ರಮ ವಹಿಸಲಾಗುತ್ತಿದೆ.<br><br>ದೇವರಹಿಪ್ಪರಗಿ ತಾಲ್ಲೂಕಿಗೆ ಸಂಬಂಧಿಸಿದಂತೆ ನೋಂದಣಿ ಆಗುವ ದಸ್ತಾವೇಜುಗಳ ಸಂಖ್ಯೆ 7000 ಕ್ಕಿಂತಲೂ ಜಾಸ್ತಿ ಇದ್ದು, ರಾಜಸ್ವ ಸಂಗ್ರಹಣೆಯೂ ಕೂಡ ರೂ.1.00 ಕೋಟಿಗಿಂತ ಹೆಚ್ಚಾಗಿರುತ್ತದೆ. ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರವರ ದಿನಾಂಕ: 07-12-2018ರ ಅಧಿಕೃತ ಜ್ಞಾಪನದನ್ವಯ ನಿಗದಿಪಡಿಸಿರುವ ಎಲ್ಲಾ ಮಾನದಂಡಗಳನ್ನು ಪೂರೈಸಿರುವ ಬಗ್ಗೆ ಪರಿಶೀಲಿಸುವ ಸಂಬಂಧ, ದಿನಾಂಕ:09-11-2023ರ ಅಧಿಕೃತ ಜ್ಞಾಪನದನ್ವಯ ರಚಿಸಲಾಗಿರುವ ಉಪ ಸಮಿತಿಯಿಂದ ವರದಿ ಬಂದ ನಂತರ ಸೂಕ್ತ ಕ್ರಮವಹಿಸಲಾಗುವುದು. |
| ಆ | ಇದ್ದರೆ ದೇವರ ಹಿಪ್ಪರಗಿಯಲ್ಲಿ ಪ್ರತ್ಯೇಕ ಉಪನೋಂದಣಾಧಿಕಾರಿಗಳ ಕಛೇರಿ ಸ್ಥಾಪಿಸಲು ಸರ್ಕಾರ ಕೈಗೊಂಡ ಕ್ರಮಗಳು ಯಾವವು; (ಸಂಪೂರ್ಣ ಮಾಹಿತಿ ನೀಡುವುದು) | |
| ಇ | ಯಾವ ಕಾಲಮಿತಿಯಲ್ಲಿ ಉಪನೋಂದಣಾಧಿಕಾರಿಗಳ ಕಛೇರಿಯನ್ನು ಸ್ಥಾಪಿಸಲಾಗುವುದು; ದೇವರ ಹಿಪ್ಪರಗಿಯಲ್ಲಿ ಉಪನೋಂದಣಾಧಿಕಾರಿಗಳ ಕಛೇರಿಗಾಗಿ ಎಷ್ಟು ಜಾಗವನ್ನು ಗುರುತಿಸಲಾಗಿದೆ? (ಸಂಪೂರ್ಣ ಮಾಹಿತಿ ನೀಡುವುದು) | |

ಕಂಇ/71/ಎಂಎಸ್ಎಸ್ಎ/2026

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು